## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಎಸ್.ಮೇಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಕಲಘಟಗಿ, ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿ ಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಜಿಎಂ/5326/2012/ ಎಆರ್ಇ-5,, ದಿನಾಂಕ:20.08.2016

2. ಅಪರ ನಿಬಂಧಕರು, ವಿಚಾರಣೆಗಳು-5 ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/5326/2012/ ಎಆರ್ಇ-5, ದಿನಾಂಕ: 23.08.2016.

****

**ಪ್ರಸ್ತಾವನೆ:**

ಅಪರ ನಿಬಂಧಕರು ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. 2009-10 ಮತ್ತು 2010-11ನೇ ಸಾಲುಗಳಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕಲಘಟಗಿ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ 27 ಗ್ರಾಮಗಳಲ್ಲಿ ಅರಣ್ಯ ಇಲಾಖೆಯ ವತಿಯಿಂದ ಸಸಿ ನೆಡುವ ಅಭಿವೃದ್ಧಿ ಕಾರ್ಯಕ್ರಮಕ್ಕೆ ವೆಚ್ಚ ಮಾಡಿದ್ದ ರೂ. 2 ಕೋಟಿಗಳಲ್ಲಿ ರೂ. 50 ಲಕ್ಷಗಳಿಗೆ ಬೋಗಸ್ ಬಿಲ್ಲುಗಳನ್ನು ತಯಾರಿಸಿ, ಈ ಕೆಳಕಂಡ ಅಧಿಕಾರಿ/ನೌಕರರುಗಳು ಸದರಿ ರೂ. 50.ಲಕ್ಷಗಳ ಹಣ ದುರುಪಯೋಗ ಮಾಡಿಕೊಂಡಿರುತ್ತಾರೆಂದು ಆರೋಪಿಸಿ, ಕಲಘಟಗಿ ನಿವಾಸಿಯಾದ ಶ್ರೀ ನೀಲಕಂಠಗೌಡ ವಿ.ಪಾಟೀಲ್, ಇವರು ನೀಡಿದ್ದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಾಯ್ದೆ

ಕಲಂ-9 ರನ್ವಯ ತನಿಖೆಗೆ ಒಳಪಡಿಸಲಾಗಿರುತ್ತದೆ ಎಂದು ಮಾನ್ಯ ಉಪ ಲೋಕಾಯುಕ್ತ-1, ಇವರು ದಿನಾಂಕ: 20.08.2016 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಾಯ್ದೆಯ ಕಲಂ 12(3) ರನ್ವಯ ನೀಡಿರುವ ಶಿಫಾರಸ್ಸಿನಲ್ಲಿ ವರದಿ ಮಾಡಿರುತ್ತಾರೆ.

| ಕ್ರ.ಸಂ | ಅಧಿಕಾರಿಯ ಹೆಸರು ಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1. | ಮಲ್ಲಿಕಾರ್ಜುನ ಎಸ್.ಮೇಟಿ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಕಲಘಟಗಿ | 1 |
| 2. | ಶ್ರೀ ಮೇಧಾರ, ಸಾಮಾಜಿಕ ರೇಂಜ್ ಅರಣ್ಯಾಧಿಕಾರಿ, ಕಲಘಟಗಿ | 2 |
| 3. | ಶ್ರೀ ಆಂಜನೇಯರೆಡ್ಡಿ, ಉಪ ಅರಣ್ಯ ಸಂರಕ್ಷಣಾಧಿಕಾರಿ, ಧಾರವಾಡ | 3 |

ದೂರುದಾರರಾದ ಶ್ರೀ ನೀಲಕಂಠಗೌಡ ಎಸ್.ಪಾಟೀಲ್, ಇವರು ಸಲ್ಲಿಸಿದ್ದ ದೂರಿನ ಬಗ್ಗೆ ಧಾರವಾಡ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪೋಲಿಸ್ ನಿರೀಕ್ಷಕರಿಂದ ವರದಿಯನ್ನು ಪಡೆಯಲಾಗಿ, ಸದರಿಯವರು ಸಲ್ಲಿಸಿದ್ದ ವರದಿಯಲ್ಲಿ ಎದುರುದಾರರು-1, ಇವರು ಸದರಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ದಾಖಲಾತಿಗಳನ್ನು ಸಲ್ಲಿಸಲು ವಿಫಲರಾಗಿರುತ್ತಾರೆಂದು, ತಿಳಿಸುತ್ತಾ, ಒದಗಿಸಿದ್ದ ಆಡಿಟ್ ವರದಿಯನ್ವಯ ಈ ಕೆಳಕಂಡ ಲೋಪಗಳು ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನಲ್ಲಿ ವರದಿಸಲಾಗಿರುತ್ತದೆ.

I. An amount of Rs. 43,48,487/-has been released to ACF(SF), Dharwad. But, no documents have been produced by Respondent no.1 about expenditure of the said amount and how the amount has been utilized.

II. An amount of Rs. 9,65,000/-has been released to ACF(Territorial), Dharwad. But, no documents have been produced by Respondent no.1 about expenditure of the said amount and how the amount has been utilized.

III. An amount of Rs. 53,86,951/-has been released to RFO, Kalaghatagi. But, no documents have been produced by Respondent no.1 about expenditure of the said amount and how the amount has been utilized.

IV. An amount of Rs. 96,432/-has been released to RFO, Kalaghatagi towards water pipelines erection in nursery. But, no documents have been produced by Respondent no.1 about expenditure of the said amount and how the amount has been utilized.

V. An amount of Rs. 18,52,000/-has been released towards water charges for maintenance of summer plantation/seedlings. But, no documents have been produced by Respondent no.1 about expenditure of the said amount and how the amount has been utilized.

VI. Respondent no.1 has not produced target of total number of rising of seedlings, actual rising of seedlings and number of plantation done.

ದೂರಿನ ಬಗ್ಗೆ ಎದುರುದಾರರುಗಳಿಂದ ಉತ್ತರವನ್ನು ಪಡೆಯಲಾಗಿ, 2ನೇ ಎದುರುದಾರರಾದ ಶ್ರೀ ಮೇಧಾರ, ಇವರನ್ನು 2010ನೇ ಸಾಲಿನಲ್ಲಿ ಸರ್ಕಾರಿ ಸೇವೆಯಿಂದ ವಜಾಗೊಳಿಸಿರುವುದರಿಂದ, ಹಾಗೂ 3ನೇ ಎದುರುದಾರರಾದ ಶ್ರೀ ಆಂಜನೇಯ ರೆಡ್ಡಿ, ಇವರು 2012ನೇ ಸಾಲಿನಲ್ಲಿ ಸರ್ಕಾರಿ ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ, ಹಾಗೂ ದೂರಿನಲ್ಲಿನ ಘಟನೆಯು 2010-11ನೇ ಸಾಲಿನಲ್ಲಿ ನಡೆದಿರುವುದರಿಂದ, ಇವರಿಬ್ಬರುಗಳ ವಿರುದ್ಧ ಯಾವುದೇ ವರದಿಯನ್ನು ಮಾಡಿರುವುದಿಲ್ಲವೆಂದು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಲ್ಲಿ ವರದಿಸಲಾಗಿರುತ್ತದೆ.

ಮೊದಲನೇ ಎದುರುದಾರರಾದ ಶ್ರೀ ಎಂ.ಎಸ್.ಮೇಟಿ, ಇವರು ನೀಡಿರುವ ಲಿಖಿತ ಉತ್ತರದಲ್ಲಿ ಸಸಿನೆಡುವ ಕಾರ್ಯಕ್ರಮ/ಕಾಮಗಾರಿಗಳನ್ನು ಅರಣ್ಯ ಇಲಾಖೆ ವತಿಯಿಂದ ನಡೆಸಲಾಗಿರುತ್ತದೆಂದು ತಿಳಿಸಿದ್ದರೂ ಸಹ, ಇವರು ಅರಣ್ಯ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನವನ್ನು ಬಳಸಿಕೊಂಡಿರುವುದಕ್ಕೆ ಯಾವುದೇ ದಾಖಲಾತಿಗಳನ್ನು ಒದಗಿಸದೇ ಇರುವುದರಿಂದ, ಹಾಗೂ ಇವರು ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ರಕ್ಷಣಾ ಹೇಳಿಕೆಯು

ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಸದರಿ ಆರೋಪಿತ ಅಧಿಕಾರಿಯು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲೋಟಕ್ಕೆ ಕಂಡು ಬಂದಿರುವುದರಿಂದ ಹಾಗೂ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಆರೋಪಿತ ಶ್ರೀ ಮಲ್ಲಿಕಾರ್ಜುನ ಎಸ್.ಮೇಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಕಲಘಟಗಿ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ವಿಚಾರಣೆಗಳು-5 ರವರು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ-l, ರವರ ಶಿಫಾರಸ್ಸು, ಹಾಗೂ ಅದರೊಂದಿಗಿನ ಅಡಕಗಳನ್ನು ಪರಿಶೀಲಿಸಲಾಗಿ, ಕಲಘಟಗಿ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಮಲ್ಲಿಕಾರ್ಜುನ.ಎಸ್.ಮೇಟಿ, ಇವರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪ/ದುರ್ನಡತೆ/ದುರ್ವರ್ತನೆ ಎಸಗಿರುವುದು ಕಂಡು ಬರುತ್ತದೆ ಆದುದರಿಂದ, ಮಾನ್ಯ ಉಪಲೋಕಾಯುಕ್ತರು-l ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸಿನಂತೆ, ಸದರಿ ಅಧಿಕಾರಿ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ, ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು, ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ, ಮಾನ್ಯ ಉಪಲೋಕಾಯುಕ್ತ-l ರವರಿಗೆ ವಹಿಸಲು, ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 180 ವಿಸೇಬಿ 2016 ಬೆಂಗಳೂರು ದಿನಾಂಕ: 27-09-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಎಂ.ಎಸ್.ಮೇಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಕಲಘಟಗಿ, (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಧಾರವಾಡ) ಇವರ ವಿರುದ್ಧದ ಆರೋಪಗಳ ಸಂಬಂಧ

ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 27/9/2016
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಜಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ)ರವರ ಕಾರ್ಯದರ್ಶಿ ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಧಾರವಾಡ.
4) ಅಪರ ನಿಬಂಧಕರು ವಿಚಾರಣೆಗಳು-5, ಎ.ಆರ್.ಇ-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
5) ಸಂಬಂಧಿಸಿದ ಅಧಿಕಾರಿಗೆ.(ಮು.ಕಾ.ನಿ.ಅ.ಜಿಪಂ. ಧಾರವಾಡ ಇವರ ಮುಖಾಂತರ)

<u>ಪ್ರತಿ ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.